# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1024 |
| ಉತ್ತರಿಸಬೇಕಾದ ದಿನಾಂಕ | : | 20.08.2025 |
| ಉತ್ತರಿಸಬೇಕಾದ ಸಚಿವರು | : | ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು |

| | | |
|---|---|---|
| ಅ) | ರಾಜ್ಯದಲ್ಲಿರುವ ನಿರ್ಮಿತಿ ಕೇಂದ್ರಗಳ ಹೆಸರು, ಈ ಕೇಂದ್ರಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಯೋಜನಾ ವ್ಯವಸ್ಥಾಪಕರ ಹೆಸರು, ವಿದ್ಯಾರ್ಹತೆ, ಎಷ್ಟು ವರ್ಷಗಳಿಂದ ಆ ಹುದ್ದೆಯಲ್ಲಿದ್ದಾರೆ ಮತ್ತು ಅವರ ನೇಮಕಾತಿ ಆದೇಶಗಳ ಪ್ರತಿ; (58 ವರ್ಷ ತುಂಬಿದ ಯೋಜನಾ ವ್ಯವಸ್ಥಾಪಕರ ವಿವರಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ 31 ಜಿಲ್ಲಾ ನಿರ್ಮಿತಿ ಕೇಂದ್ರಗಳು, ಕ್ಯಾಪ್ಟಿವ್ ನಿರ್ಮಿತಿ ಕೇಂದ್ರ, ರಾಯಚೂರು ಹಾಗೂ ಕರ್ನಾಟಕ ರಾಜ್ಯ ಹ್ಯಾಬಿಟೇಟ್ ಕೇಂದ್ರ ಒಟ್ಟಾರೆ 33 ಸಂಸ್ಥೆಗಳಿದ್ದು, ಈ ಸಂಸ್ಥೆಗಳ ಜಿಲ್ಲಾವಾರು ಯೋಜನಾ ನಿರ್ದೇಶಕರು/ವ್ಯವಸ್ಥಾಪಕರ ರವರ ಹೆಸರು, ವಿದ್ಯಾರ್ಹತೆ, ಎಷ್ಟು ವರ್ಷಗಳಿಂದ ಸದರಿ ಹುದ್ದೆಯಲ್ಲಿದ್ದಾರೆ ಎಂಬ ವಿವರಗಳನ್ನು ಅನುಬಂಧ -1ರಲ್ಲಿ ಒದಗಿಸಲಾಗಿದೆ.<br><br>ಮುಂದುವರೆದು ಶ್ರೀ. ರಾಜೇಂದ್ರ ಕಲ್ಬಾವಿ ಇವರಿಗೆ 58 ವರ್ಷ ತುಂಬಿದ್ದು, ಸದರಿಯವರು ಯೋಜನಾ ನಿರ್ದೇಶಕ ಹುದ್ದೆಯಲ್ಲಿ, ದಕ್ಷಿಣಕನ್ನಡ ಜಿಲ್ಲಾ ನಿರ್ಮಿತಿ ಕೇಂದ್ರದಲ್ಲಿ ಮಾತ್ರ ಕಾರ್ಯನಿರ್ವಹಿಸುತ್ತಿದ್ದಾರೆ, ಇವರಿಗೆ ಸಂಬಂಧಿಸಿದ ವಿವರಗಳನ್ನು ಅನುಬಂಧ -2 ರಲ್ಲಿ ಒದಗಿಸಲಾಗಿದೆ. |
| ಆ) | ರಾಜ್ಯದಲ್ಲಿರುವ ಎಲ್ಲಾ ನಿರ್ಮಿತಿ ಕೇಂದ್ರಗಳು ಅಳವಡಿಸಿಕೊಂಡಿರುವ ಬೈಲಾ ಪ್ರತಿಗಳನ್ನು ನೀಡುವುದು? | ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಜಿಲ್ಲಾ ನಿರ್ಮಿತಿ ಕೇಂದ್ರಗಳ ಬೈಲಾದ ಮೂಲ ಉದ್ದೇಶಗಳು ಒಂದೇಯಾಗಿದ್ದು, ಜಿಲ್ಲಾಧಿಕಾರಿಗಳು ಆಯಾ ಜಿಲ್ಲೆಯ ಆಡಳಿತ ಮಂಡಳಿಯ ಅಧ್ಯಕ್ಷರಾಗಿದ್ದು, ಮಾಹಿತಿಗಾಗಿ ಒಂದು ಮಾದರಿ ಬೈಲಾ ಪ್ರತಿಯನ್ನು ಅನುಬಂಧ-3ರಲ್ಲಿ ಒದಗಿಸಲಾಗಿದೆ. |
| ಇ) | ತುಮಕೂರು, ಹಾಸನ, ದಾವಣಗೆರೆ, ಬಳ್ಳಾರಿ, ವಿಜಯಪುರ, ಚಾಮರಾಜನಗರ, ಬಾಗಲಕೋಟೆ ನಿರ್ಮಿತಿ ಕೇಂದ್ರಗಳಲ್ಲಿ ಯೋಜನಾ ವ್ಯವಸ್ಥಾಪಕರ ಹುದ್ದೆಗಳು ಖಾಲಿ ಇದ್ದಾಗ್ಯೂ ಆ ಹುದ್ದೆಗಳನ್ನು ತುಂಬಲು ಅಧಿಸೂಚನೆಗಳನ್ನು ಹೊರಡಿಸದೆ, ಆ ಹುದ್ದೆಗಳನ್ನು ಪ್ರಭಾರದಲ್ಲಿ ನಡೆಸುತ್ತಿರುವುದಕ್ಕೆ ಕಾರಣಗಳೇನು ; ಈ ಹುದ್ದೆಗಳ ಭರ್ತಿ ಮಾಡಲು ಪ್ರಕಟಣೆ ಹೊರಡಿಸಿ, ಅರ್ಹ ಅಭ್ಯರ್ಥಿಗಳನ್ನು ನೇಮಕಾತಿ ಮಾಡಲು ಸರ್ಕಾರವು ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದು; (ಮಾಹಿತಿ ನೀಡುವುದು) | ತುಮಕೂರು, ಹಾಸನ, ದಾವಣಗೆರೆ ಹಾಗೂ ಬಾಗಲಕೋಟೆ ನಿರ್ಮಿತಿ ಕೇಂದ್ರಗಳಲ್ಲಿ ಯೋಜನಾ ವ್ಯವಸ್ಥಾಪಕ/ನಿರ್ದೇಶಕರ ಹುದ್ದೆಗಳಲ್ಲಿ ಕ್ರಮವಾಗಿ ಶ್ರೀ ಡಿ. ರಾಜಶೇಖರ, ಶ್ರೀ ರಾಮಕೃಷ್ಣೇಗೌಡ, ಶ್ರೀ ಡಿ ಚಂದನ್, ಶ್ರೀ ಶಂಕರಲಿಂಗ ಗೋಗಿ ರವರುಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿದ್ದು, ಸದರಿ ಜಿಲ್ಲೆಗಳಲ್ಲಿ ಹುದ್ದೆಗಳು ಪ್ರಸ್ತುತ ಖಾಲಿಯಿರುವುದಿಲ್ಲ.<br><br>ಬಳ್ಳಾರಿ ಹಾಗೂ ವಿಜಯಪುರ ಜಿಲ್ಲಾ ನಿರ್ಮಿತಿ ಕೇಂದ್ರಗಳ ಯೋಜನಾ ವ್ಯವಸ್ಥಾಪಕರ/ನಿರ್ದೇಶಕರ ಹುದ್ದೆಗಳಿಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವಾದ ಆಯಾ ಜಿಲ್ಲಾ ನಿರ್ಮಿತಿ ಕೇಂದ್ರಗಳ ಆಡಳಿತ ಮಂಡಳಿ (Governing Council) ತೀರ್ಮಾನದಂತೆ ಅದೇ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳನ್ನು ಪ್ರಭಾರದಲ್ಲಿರಿಸಿ ಕರ್ತವ್ಯ ಕಾರ್ಯನಿರ್ವಹಿಸುತ್ತಿರುತ್ತಾರೆ.<br>ಹಾಗೂ ಶ್ರೀಮತಿ ಮಂಜುಳ ಹೆಚ್.ಎನ್., ಇವರನ್ನು ಚಾಮರಾಜನಗರ ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕರ ಹುದ್ದೆಗೆ ಕಾರ್ನಿಕ್ ಸಂಸ್ಥೆಯಿಂದ ಈ ಹಿಂದೆ ನಿಯೋಜಿಸಲಾಗಿತ್ತು.<br><br>ಪ್ರಸ್ತುತ ದಿನಾಂಕ 16.08.2025ರಂದು ಜಿಲ್ಲಾಧಿಕಾರಿಗಳು/ಅಧ್ಯಕ್ಷರು, ಚಾಮರಾಜನಗರ ಜಿಲ್ಲಾ ನಿರ್ಮಿತಿ ಕೇಂದ್ರ ಇವರು ಸದರಿಯವರ ಸೇವೆಯನ್ನು ಚಾಮರಾಜನಗರ ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕರ ಹುದ್ದೆಯಿಂದ ಬಿಡುಗಡೆಗೊಳಿಸಿ, ಕಾರ್ನಿಕ್ ಸಂಸ್ಥೆಯ ಮೂಲ ಹುದ್ದೆಯಲ್ಲಿ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳಲು ಸೂಚಿಸಲಾಗಿರುತ್ತದೆ.<br><br>ಯೋಜನಾ ವ್ಯವಸ್ಥಾಪಕರು/ನಿರ್ದೇಶಕರ ಹುದ್ದೆ ಖಾಲಿ ಇರುವ ಜಿಲ್ಲಾ ನಿರ್ಮಿತಿ ಕೇಂದ್ರಗಳಲ್ಲಿ ಪೂರ್ಣಾವಧಿಗೆ ನೇಮಕಾತಿಗೆ ಸಂಬಂಧಿಸಿದಂತೆ ಸಕ್ಷಮ ಪ್ರಾಧಿಕಾರ ಆಯಾ ಜಿಲ್ಲಾ ನಿರ್ಮಿತಿ ಕೇಂದ್ರದ ಆಡಳಿತ ಮಂಡಳಿ (Governing Council) ವ್ಯಾಪ್ತಿಗೆ ಒಳಪಟ್ಟಿರುತ್ತದೆ. |

ಸಂಖ್ಯೆ: ವಇ 383 ಹೆಚ್‌ಎಎಂ 2025

(ಬಿ.ಜೆಡ್. ಜಮೀರ್ ಅಹ್ಮದ್ ಖಾನ್)
ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ
ಕಲ್ಯಾಣ ಸಚಿವರು